# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಸರ್ಕಾರಿ ಆರೋಗ್ಯ ಸಂಸ್ಥೆಗಳಲ್ಲಿನ ಔಷಧಿಗಳ ಬೇಡಿಕೆಯನ್ನು Online ಮುಖಾಂತರ ಸಲ್ಲಿಸುವ ಕುರಿತು.

ಓದಲಾಗಿದೆ:- ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಬೆಂಗಳೂರು ಇವರ ಪತ್ರ ಸಂಖ್ಯೆ: ಕೆಡಿಎಲ್/ಸಿಎಸ್/42/2016-17, ದಿನಾಂಕ: 29/09/2016.

*****

**ಪ್ರಸ್ತಾವನೆ:**

ರಾಜ್ಯದ ಸರ್ಕಾರಿ ಆಸ್ಪತ್ರೆಗಳಿಗೆ ಕರ್ನಾಟಕ ರಾಜ್ಯ ಡ್ರಗ್ಸ್ ಲಾಜಿಸ್ಟಿಕ್ಸ್ ಮತ್ತು ವೇರ್ ಹೌಸಿಂಗ್ ಸೊಸೈಟಿಯಿಂದ ಟೆಂಡರ್ ಮೂಲಕ ಔಷಧಿಗಳನ್ನು ಖರೀದಿಸಲಾಗುತ್ತಿದೆ. ಕರ್ನಾಟಕ ರಾಜ್ಯ ಡ್ರಗ್ಸ್ ಲಾಜಿಸ್ಟಿಕ್ಸ್ ಮತ್ತು ವೇರ್ ಹೌಸಿಂಗ್ ಸೊಸೈಟಿಯು ಟೆಂಡರ್ ಮೂಲಕ ಗಣನೀಯ ಪ್ರಮಾಣದಲ್ಲಿ ಔಷಧಿಗಳನ್ನು ಖರೀದಿಸಿ ಅಗತ್ಯತೆಗೆ ಅನುಗುಣವಾಗಿ ಸರಬರಾಜು ಮಾಡಲು ಸಂಗ್ರಹಿಸಿರುತ್ತದೆ. ಈ ಸಂಗ್ರಹವಾದ ಔಷಧಿಗಳು ನಿಗದಿತ ಸಮಯದಲ್ಲಿ ಆಸ್ಪತ್ರೆಗಳಿಗೆ ಸರಬರಾಜಾಗದೆ ಅವಧಿ ಮೀರಿ ನಿರುಪಯುಕ್ತವಾಗುತ್ತದೆ. ಆದ್ದರಿಂದ ಈ ರೀತಿಯ ಅಪವ್ಯಯವನ್ನು ತಪ್ಪಿಸುವ ಸಲುವಾಗಿ ಸರ್ಕಾರವು ಆಸ್ಪತ್ರೆಗಳ ಬೇಡಿಕೆಗನುಗುಣವಾಗಿ Online ಮೂಲಕ ಔಷಧಿಗಳನ್ನು ಸರಬರಾಜು ಮಾಡಲು ತೀರ್ಮಾನಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಆಕುಕ 164 ಹೆಚ್‌ಪಿಸಿ 2016 (ಭಾಗ-1), ಬೆಂಗಳೂರು, ದಿನಾಂಕ: 01-10-2016.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಹಿನ್ನೆಲೆಯಲ್ಲಿ ರಾಜ್ಯದ ವಿವಿಧ ಆರೋಗ್ಯ ಸಂಸ್ಥೆಗಳಿಗೆ ಅವಶ್ಯಕತೆ ಇರುವ ಔಷಧಿ, ರಾಸಾಯನಿಕ ಮತ್ತು ಇತರೆ ವಸ್ತುಗಳನ್ನು ಇನ್ನುಮುಂದೆ ಆಸ್ಪತ್ರೆಗಳ ಬೇಡಿಕೆಗನುಗುಣವಾಗಿ Online ಮುಖಾಂತರ ಖರೀದಿಸತಕ್ಕದ್ದು. ಔಷಧಿ ಮತ್ತು ರಾಸಾಯನಿಕಗಳನ್ನು Online ಮೂಲಕ ಖರೀದಿಸುವ ಸಂದರ್ಭದಲ್ಲಿ ಬೇಡಿಕೆ ಪಟ್ಟಿಗಳನ್ನು ಸಲ್ಲಿಸಲು ಈ ಕೆಳಕಂಡ ಅಂಶಗಳನ್ನು ಪಾಲಿಸಬೇಕಾಗಿರುತ್ತದೆ.

1. ಕಳೆದ ಮೂರು ವರ್ಷಗಳ ಒಳ ರೋಗಿ ಹಾಗೂ ಹೊರ ರೋಗಿಗಳ ಪ್ರಮಾಣಕ್ಕೆ ಅನುಗುಣವಾಗಿ ಬೇಡಿಕೆ ಪಟ್ಟಿಯನ್ನು ಸಲ್ಲಿಸಬೇಕು.
2. ಬೇಡಿಕೆ ಪಟ್ಟಿ ಸಲ್ಲಿಸುವಾಗ ತಮ್ಮಲ್ಲಿರುವ ಹಾಲಿ ದಾಸ್ತಾನು ಲಭ್ಯತೆಯನ್ನು ಗಣನೆಗೆ ತೆಗೆದುಕೊಳ್ಳುವುದು.
3. Fast Moving, Medium Moving ಹಾಗೂ Slow Moving ಔಷಧಿಗಳ ಪಟ್ಟಿಯನ್ನು ತಯಾರಿಸುವುದು.

4. ಪ್ರತಿಯೊಂದು ಆರೋಗ್ಯ ಸಂಸ್ಥೆಗಳಲ್ಲಿ ಥೆರಾಪಿಟಿಕ್ ಕಮಿಟಿ ಸಭೆಯನ್ನು ಜರುಗಿಸಿ ತಜ್ಞತೆವಾರು ಬೇಡಿಕೆಯನ್ನು ಪಡೆದುಕೊಂಡು ಕ್ರೋಡೀಕರಿಸಿ **Online** ಮುಖಾಂತರ ಬೇಡಿಕೆ ಪಟ್ಟಿಯನ್ನು ಸಲ್ಲಿಸಬೇಕು.

ಮುಂದುವರೆದು, ಬೇಡಿಕೆ ಪಟ್ಟಿಯನ್ನು ಪ್ರತಿ ಆರ್ಥಿಕ ವರ್ಷದ ಏಪ್ರಿಲ್ ತಿಂಗಳಲ್ಲಿ ಸಲ್ಲಿಸಲು ಸೂಚನೆಯನ್ನು ನೀಡಲಾಗುವುದು ಹಾಗೂ ಇದಕ್ಕೆ ಸಂಬಂಧಿಸಿದಂತೆ **Online** ಮುಖಾಂತರ ಔಷಧಿಗಳ ಬೇಡಿಕೆ ಪಟ್ಟಿ ಸಲ್ಲಿಸುವುದು ಮತ್ತು ಯಾವುದೇ ಹಂತದಲ್ಲೂ ಬೇಡಿಕೆ ಪಟ್ಟಿ ಅನುಸಾರ ಸ್ವೀಕರಿಸಿದ ಔಷಧಿಗಳನ್ನು ಅವುಗಳ ಜೀವಿತಾವಧಿಯಲ್ಲಿ ಉಪಯೋಗಿಸಿ ಅವಧಿ ಮೀರಿ ಹಾಳಾಗದಂತೆ ಕ್ರಮವಹಿಸಲು ಈ ಮೂಲಕ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಬಿ.ವಿ. ಶ್ರೀನಿವಾಸಯ್ಯ)
ಸರ್ಕಾರದ ಅಧೀನ ಕಾರ್ಯದರ್ಶಿ,
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ.

ಇವರಿಗೆ:

1) ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಆನಂದರಾವ್ ವೃತ್ತ, ಬೆಂಗಳೂರು.
2) ಅಭಿಯಾನ ನಿರ್ದೇಶಕರು, ರಾಷ್ಟ್ರೀಯ ಆರೋಗ್ಯ ಅಭಿಯಾನ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಆನಂದರಾವ್ ವೃತ್ತ, ಬೆಂಗಳೂರು.
3) ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಆನಂದರಾವ್ ವೃತ್ತ, ಬೆಂಗಳೂರು.
4) ಅಪರ ನಿರ್ದೇಶಕರು, ಕರ್ನಾಟಕ ಸ್ಟೇಟ್ ಡ್ರಗ್ಸ್ ಅಂಡ್ ಲಾಜಿಸ್ಟಿಕ್ಸ್ ವೇರ್ ಹೌಸಿಂಗ್ ಸೊಸೈಟಿ, ನಂ. 1, ಡಾ: ಸಿದ್ದಯ್ಯ ಪುರಾಣಿಕ್ ರಸ್ತೆ, ಕೆ.ಹೆಚ್.ಬಿ. ಕಾಲೋನಿ, ಮಾಗಡಿ ರಸ್ತೆ, ಬೆಂಗಳೂರು-79.
5) ಔಷಧ ನಿಯಂತ್ರಕರು, ಔಷಧ ನಿಯಂತ್ರಣ ಇಲಾಖೆ, ಅರಮನೆ ರಸ್ತೆ, ಬೆಂಗಳೂರು.
6) ಎಲ್ಲಾ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು ಮತ್ತು ಎಲ್ಲಾ ಜಿಲ್ಲಾ ಶಸ್ತ್ರ ಚಿಕಿತ್ಸಕರುಗಳು (ನಿರ್ದೇಶಕರ ಮುಖಾಂತರ)
7) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
8) ಶಾಖಾ ರಕ್ಷಾ ಕಡತ / ಬಿಡಿ ಪ್ರತಿಗಳು.